# ಸಿಬಿಎಸ್‌ಇ, ಐಸಿಎಸ್‌ಇ 10, 12ನೇ ತರಗತಿ ಬಾಕಿ ಪರೀಕ್ಷೆ ರದ್ದು

**ಹೊಸದಿಲ್ಲಿ:** ದೇಶಾದ್ಯಂತ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜುಲೈ 1ರಿಂದ 15ರವರೆಗೆ ನಡೆಯಬೇಕಾಗಿದ್ದ ಸಿಬಿಎಸ್‌ಇ ಪಠ್ಯಕ್ರಮದ 10 ಮತ್ತು 12ನೇ ತರಗತಿ ಬಾಕಿ ಇರುವ ವಿಷಯಗಳ ಪರೀಕ್ಷೆಯನ್ನು ರದ್ದುಪಡಿಸುವ ನಿರ್ಧಾರ ಕೈಗೊಳ್ಳಲಾಗಿದೆ ಸಿಬಿಎಸ್‌ಇ ಸುಪ್ರೀಂ ಕೋರ್ಟ್‌ಗೆ ಗುರುವಾರ ಈ ಮಾಹಿತಿ ನೀಡಿದೆ. ಐಸಿಎಸ್‌ಇ ಕೂಡ ಜುಲೈ 1ರಿಂದ 14ರವರೆಗೆ ನಡೆಯಬೇಕಿದ್ದ 10 ಮತ್ತು 12ನೇ ತರಗತಿ ಬಾಕಿ ಇರುವ ವಿಷಯಗಳ ಪರೀಕ್ಷೆಗಳನ್ನು ರದ್ದುಪಡಿಸುವುದಾಗಿ ಹೇಳಿದೆ. ಸಿಎಎ ವಿರೋಧಿ ಗಲಭೆ ಹಿನ್ನೆಲೆಯಲ್ಲಿ ಈಶಾನ್ಯ ದಿಲ್ಲಿಯಲ್ಲಿ ಮಾತ್ರ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆ ಬಾಕಿ ಉಳಿದಿತ್ತು. ಉಳಿದ ಕಡೆ 12ನೇ ತರಗತಿ ಪರೀಕ್ಷೆಗಳು ಬಾಕಿ ಉಳಿದಿದ್ದವು. "12ನೇ ತರಗತಿ ವಿದ್ಯಾರ್ಥಿಗಳಿಗೆ ಕಳೆದ ಮೂರು ಶಾಲಾ ಪರೀಕ್ಷೆಗಳ ಫಲಿತಾಂಶದ ಆಧಾರದ ಮೇಲೆ ಅಂತಿಮ ಫಲಿತಾಂಶ ನೀಡಲಾಗುವುದು. ವಿದ್ಯಾರ್ಥಿಗಳು ತಮ್ಮ ರಿಸಲ್ಟ್ ಸುಧಾರಣೆ ಮಾಡಿಕೊಳ್ಳಲು ಮುಂದೆ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದಾದರೂ ಇದು ಐಚ್ಛಿಕವಾಗಿರಲಿದೆ," ಎಂದು ಸಿಬಿಎಸ್‌ಇ ಕೋರ್ಟ್‌ಗೆ ಹೇಳಿದೆ.